<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,</u>
<u>ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು</u>

**S.C. No. 273/2023**

| | | | |
|---|---|---|---|
| ಸಾಕ್ಷಿಯ ಹೆಸರು | ಶ್ರೀ. ರಮೇಶ್ | ಚಾಸಾಃ | ಪ್ರಾಸಾಃ |
| ತಂದೆಯ ಹೆಸರು | ಮುನಿವೆಂಕಟಪ್ಪ | 5 | 7 |
| ವಯಸ್ಸು | 37 ವರ್ಷ | ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು. ದಿನಾಂಕ **14.01.2026.** | |
| ಉದ್ಯೋಗ | ಚಾಲಕ | | |
| ವಾಸ ಸ್ಥಳ | ಕೋನದಾಸಪುರ | | |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ಈಗ ನನಗೆ ತೋರಿಸಿದ ನೋಟೀಸ್ ನಲ್ಲಿ ನನ್ನ ಸಹಿ ಇದ್ದು ಅದನ್ನು ನಿಶಾನೆ.ಪಿ. 8 ಎಂದು ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 8 (ಎ) ಎಂದು ಗುರುತಿಸಲಾಯಿತು. ಈಗ ನನಗೆ ತೋರಿಸಿದ ನಿಶಾನೆ.ಪಿ. 2 ರ ಮಹಜರ್ ನಲ್ಲಿ ನನ್ನ ಸಹಿ ಇದ್ದು ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 2 (ಸಿ) ಎಂದು ಗುರುತಿಸಲಾಯಿತು. ಸುಮಾರು 1 ವರ್ಷ ಸಂಜೆ 5.30 – 6.00 ಗಂಟೆಯ ಬರೆಗೆ ಹಿಂದೆ ನಮ್ಮ ಮನೆಯ ಬಳಿ ಮಹಜರ್ ಗೆ ಸಹಿ ಮಾಡಿದ್ದೇನೆ. ಮಹಜರ್ ಗೆ ಹಿಂದಿನ ದಿನ ಗಲಾಟೆಯಾಗಿತ್ತು. ಗಲಾಟಯಾದ ಬಗ್ಗೆ ಪೋಲೀಸರು ಸ್ಥಳಕ್ಕೆ ಬಂದು ಬರೆದುಕೊಂಡು ನನ್ನ ಸಹಿ ಪಡೆದುಕೊಂಡು. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಪೋಲೀಸರು ವಶಕ್ಕೆ ಪಡೆದಿಲ್ಲ. ನಿಶಾನೆ.ಪಿ. 2 ರ ಒಕ್ಕಣೆ ಗೊತ್ತಿಲ್ಲ. ಸಾಕ್ಷಿಗೆ ನಿಶಾನೆ.ಪಿ. 3 ರ ಫೋಟೋವನ್ನು ತೋರಿಸಿದ್ದು ಅದನ್ನು ಸಾಕ್ಷಿ ಗುರುತಿಸಿರುತ್ತಾರೆ. ನ್ಯಾಯಾಲಯದ ಮುಂದೆ ಇರುವ ಸಲಾಕೆಯನ್ನು ಸಾಕ್ಷಿ ಗುರುತಿಸುವುದಿಲ್ಲ.

(ಈ ಸಾಕ್ಷಿಯನ್ನು ಅಭಿಯೋಜಕರು ಭಾಗಶಃ ಪ್ರತಿ ಕೂಲ ಸಾಕ್ಷಿ ಅಂತ ಪರಿಗಣಿಸಲು ಅನುಮತಿ ಕೇಳಿದ್ದು ಸಾಕ್ಷಿಯು ನೀಡಿದ್ದ ವ್ಯತಿರಿಕ್ತ ಹೇಳಿಕೆಯನ್ನು ಗಣನೆಗೆ ತೆಗೆದುಕೊಂಡು ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿನಾಂಕ 04.01.2022 ರಂದು ಪೊಲೀಸರು ಮರಿಯಪ್ಪ ರವರ ವಾಸದ ಮನೆಯ ಬಳಿ ಆರೋಪಿತರು ಚಾಸಾ. 1 ರವರು ಹಲ್ಲೆ ಮಾಡಿದ ಜಾಗವನ್ನು ಚಾಸಾ. 1 ರವರು ತೋರಿಸಿದ್ದು ಅಲ್ಲಿ

ಪೊಲೀಸರು ನನ್ನ ಸಮಕ್ಷಮ ಮಹಜರ್ ಮಾಡಿ ಸ್ಥಳದಲ್ಲಿ ಕಬ್ಬಿಣದ ರಾಡ್ ಅನ್ನು ವಶಕ್ಕೆ ಪಡೆದರು ಎಂದರೆ ಸರಿ ಅಲ್ಲ. ಈ ಬಗ್ಗೆ ಪೋಲಿಸರು ಮಹಜರ್ ಮಾಡಿ ಓದಿ ಹೇಳಿದ ನಂತರ ಸಹಿ ಮಾಡಿದ್ದೇನೆ ಎಂದರೆ ಸರಿ ಅಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

ಪಾಟೀ ಸವಾಲುಃ ಆರೋಪಿತರ ಪರ ಶ್ರೀ. NKG ವಕೀಲರಿಂದ : ಇಲ್ಲ ಎಂದು ಹೇಳಿರುತ್ತಾರೆ.

<u>ಮರು ವಿಚಾರಣೆ ಇಲ್ಲ</u>

(ಈ ಸಾಕ್ಷಿದಾರರನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ವಿಚಾರಣೆ ಮಾಡಿದ್ದು ಅದನ್ನು ಯಥಾವತ್ತಾಗಿ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ,

**(ಶ್ರೀಮತಿ. ಬಿ.ಎಸ್.ರೇಖಾ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.